## ಸದ್ಯಕ್ಕೆ ಕೊರೋನಾ ಬಗ್ಗೆ ಯಾವ ಆತಂಕಗಳಿಲ್ಲ: ಸ್ಪೀಕರ್ ವಿಶ್ವೇಶ್ವರ ಹೆಗಡೆ ಕಾಗೇರಿ ಅಭಿಮತ

# ಅಧಿವೇಶನ ಆಯೋಜನೆ ಸವಾಲಿನ ಕೆಲಸ

• **ಕನ್ನಡಪ್ರಭ ವಾರ್ತೆ** ಬೆಳಗಾವಿ

ಇಲ್ಲಿನ ಸುವರ್ಣಸೌಧದಲ್ಲಿ ಡಿ.13 ರಿಂದ 24ರವರೆಗೆ ನಡೆಯಲಿರುವ ಚಳಿಗಾಲದ ಅಧಿವೇಶನವನ್ನು ಯಶಸ್ವಿಗೊಳಿಸಲು ಉತ್ತಮ ವಸತಿ, ಸಾರಿಗೆ, ಆಹಾರ, ಶಿಷ್ಟಾಚಾರ ಸಿದ್ಧತೆಗಳನ್ನು ಸರ್ಕಾರ, ಜಿಲ್ಲಾಡಳಿತ ಸಮರ್ಪಕವಾಗಿ ಕೈಗೊಳ್ಳಬೇಕು. ಸದ್ಯಕ್ಕೆ ಕೊರೋನಾ ಬಗ್ಗೆ ಯಾವುದೇ ಆತಂಕಗಳಿಲ್ಲ ಎಂದು ವಿಧಾನಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಹೇಳಿದರು.

ಸುವರ್ಣಸೌಧದ ಸಮ್ಮೇಳನ ಸಭಾಂಗಣದಲ್ಲಿ ಗುರುವಾರ ನಡೆದ ಅಧಿವೇಶನದ ಪೂರ್ವಸಿದ್ಧತಾ ಸಭೆಯಲ್ಲಿ ಅವರು ಮಾತನಾಡಿದ ಅವರು, ಅಧಿವೇಶನಕ್ಕೆ ಸಂಬಂಧಿಸಿದಂತೆ ವಿಧಾನಸಭೆ ಹಾಗೂ ವಿಧಾನ ಪರಿಷತ್ತಿನ ಬುಲೆಟಿನ್, ಕಾರ್ಯಕ್ರಮ ಪಟ್ಟಿ, ಕಲಾಪಗಳು, ಪ್ರಶ್ನೋತ್ತರಗಳ ಸಿದ್ಧತೆಗಳನ್ನು ಕೈಗೊಳ್ಳಲಾಗಿದೆ. ಈ ಹಿಂದೆ 2018ರ ಡಿಸೆಂಬರ್‌ನಲ್ಲಿ ಅಧಿವೇಶನ ನಡೆದಿತ್ತು. ಅದರ ನಂತರ ಕೊರೋನಾ ಕಾರಣದಿಂದ ಮೂರು ವರ್ಷಗಳ ಬಳಿಕ ಸುವರ್ಣಸೌಧದಲ್ಲಿ ಅಧಿವೇಶನ ನಡೆಯುತ್ತಿದೆ. ಕೊರೋನಾ ನಿಯಂತ್ರಣ, ಅತಿವೃಷ್ಟಿ, ವಿಧಾನಪರಿಷತ್ ಚುನಾವಣೆ ಎಲ್ಲವುಗಳ ಮಧ್ಯೆ ಅಧಿವೇಶನ ಆಯೋಜಿಸುವುದು ಸವಾಲಿನ ಕಾರ್ಯವಾಗಿದೆ ಎಂದರು.

ಸಿದ್ಧತೆಗಳನ್ನು ಸರ್ಕಾರ, ಜಿಲ್ಲಾಡಳಿತ, ವಿಧಾನಸಭೆ ಹಾಗೂ ವಿಧಾನಪರಿಷತ್ತಿನ ಪರಸ್ಪರ ಸಮನ್ವಯದೊಂದಿಗೆ ವಿಶ್ವಾಸಪೂರ್ಣವಾಗಿ ಆಯೋಜಿಸಬೇಕು. ಎಲ್ಲ ಹಂತಗಳಲ್ಲಿ ಜವಾಬ್ದಾರಿಯುತವಾಗಿ ಪರಸ್ಪರ ಸಂವಹನ ಮಾಡಬೇಕು. ಸಚಿವರು, ಶಾಸಕರ ಹಿರಿತನ ಆಧರಿಸಿ ಸೌಕರ್ಯಗಳನ್ನು ಕಲ್ಪಿಸಬೇಕು. ಎಲ್ಲರಿಗೂ ಲೇಸನ್ ಅಧಿಕಾರಿಗಳನ್ನು ನೇಮಿಸಬೇಕು. ಜವಾಬ್ದಾರಿಗಳನ್ನು ವಿಕೇಂದ್ರೀಕರಣಗೊಳಿಸಿ ಕಾರ್ಯ ಹಂಚಿಕೆ ಮಾಡಬೇಕು. ಅಧಿವೇಶನ ವೀಕ್ಷಣೆಗೆ ಸಾರ್ವಜನಿಕರಿಗೆ ಅವಕಾಶವಿದೆ. ಕೊರೋನಾ ಕಾರಣದಿಂದ ಈ ಬಾರಿ ಮಕ್ಕಳಿಗೆ ಅವಕಾಶವಿಲ್ಲ ಎಂದು ಸ್ಪಷ್ಟಪಡಿಸಿದರು.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಮಾತನಾಡಿ, ಅಧಿವೇಶನವನ್ನು ಸಾಧ್ಯವಾದಷ್ಟು ಕಡಿಮೆ ಖರ್ಚಿನಲ್ಲಿ ಆಯೋಜಿಸಬೇಕು. ವಿಧಾನಸಭೆ ಹಾಗೂ ವಿಧಾನಪರಿಷತ್ತಿನ ಎಲ್ಲ ಸದಸ್ಯರಿಗೆ ಬೆಳಗಾವಿಯಲ್ಲಿಯೇ ವಸತಿ ಸೌಕರ್ಯ ಕಲ್ಪಿಸಿದರೆ ಸದನಕ್ಕೆ ಅವರು ಸಕಾಲದಲ್ಲಿ ಹಾಜರಾಗಲು ಅನುಕೂಲವಾಗುತ್ತದೆ ಎಂದರು.



ವಿಧಾನಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ, ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರು ಸುವರ್ಣಸೌಧದಲ್ಲಿ ಅಧಿವೇಶನದ ಪೂರ್ವಸಿದ್ಧತೆಗಳನ್ನು ಪರಿಶೀಲಿಸಿದರು.

ವಿಧಾನಸಭೆ ಉಪಸಭಾಧ್ಯಕ್ಷ ಆನಂದ ಮಾಮನಿ ಮಾತನಾಡಿ, ವಿಧಾನಮಂಡಲ ಅಧಿವೇಶನ ಅಚ್ಚುಕಟ್ಟಾಗಿ ಆಯೋಜಿಸಬೇಕು. ಅಧಿವೇಶನ ಸಮಯದಲ್ಲಿ ತಾಲೂಕು ಮಟ್ಟದಲ್ಲಿ ಗ್ರೇಡ್-2 ತಹಸೀಲ್ದಾರರು, ತಾಪಂ ಕಾರ್ಯನಿರ್ವಾಹಕ ಅಧಿಕಾರಿಗಳು, ಪುರಸಭೆ, ಪಟ್ಟಣ ಪಂಚಾಯತಿಗಳ ಮುಖ್ಯಾಧಿಕಾರಿಗಳು ತಮ್ಮ ಕೇಂದ್ರ ಸ್ಥಾನಗಳಲ್ಲಿಯೇ ಇದ್ದು ಸ್ಥಳೀಯ ಜನರ ಸಮಸ್ಯೆಗಳಿಗೆ ಸ್ಪಂದಿಸಬೇಕು ಎಂದರು.

ಲೋಕೋಪಯೋಗಿ ಇಲಾಖೆ ಮುಖ್ಯ ಅಭಿಯಂತರ ಶಂಕರಗೌಡ ಪಾಟೀಲ ಮಾತನಾಡಿ, ಸುವರ್ಣಸೌಧ ನಿರ್ವಹಣೆ ಕಾರ್ಯವನ್ನು ಕಳೆದ ಒಂದು ತಿಂಗಳಿನಿಂದ ನಿರ್ವಹಿಸಲಾಗುತ್ತಿದೆ. ಇಲ್ಲಿ ಕಾರ್ಯನಿರ್ವಹಿಸುತ್ತಿದ್ದ ವಿವಿಧ 23 ಕಚೇರಿಗಳನ್ನು ಕೆಳಮಹಡಿಗೆ ಸ್ಥಳಾಂತರಿಸಲಾಗಿದೆ. ಆವರಣದಲ್ಲಿ ವಾಹನ ನಿಲುಗಡೆಗೆ ನೆಲ ಸಮತಟ್ಟುಗೊಳಿಸಲಾಗುತ್ತಿದೆ. ಇಂಟರ್‌ನೆಟ್, ವೆಬ್ ಕಾಸ್ಟಿಂಗ್ ಮಾಡಲು ಏರ್ಪಾಡುಗಳನ್ನು ಮಾಡಿಕೊಳ್ಳಲಾಗುತ್ತಿದೆ ಎಂದರು.

ಅಧಿವೇಶನದ ವಿಶೇಷಾಧಿಕಾರಿ ಡಾ.ಸುರೇಶ ಇಟ್ನಾಳ ಮಾತನಾಡಿ, 2018ರ ದರದಲ್ಲಿಯೇ ಹೋಟೆಲ್ ಕೋಣೆಗಳನ್ನು ಒದಗಿಸಲು ಈಗಾಗಲೇ ತಿಳಿಸಲಾಗಿದೆ. ಸಾರಿಗೆ ವ್ಯವಸ್ಥೆ ಮಾಡಿಕೊಳ್ಳಲಾಗುತ್ತಿದೆ ಎಂದರು. ವಿಧಾನಸಭೆ ಕಾರ್ಯದರ್ಶಿ ಎಂ.ಕೆ. ವಿಶಾಲಾಕ್ಷಿ, ವಿಧಾನಪರಿಷತ್ ಕಾರ್ಯದರ್ಶಿ ಕೆ. ಆರ್.ಮಹಾಲಕ್ಷ್ಮಿ, ಜಿಲ್ಲಾಧಿಕಾರಿ ಆರ್. ವೆಂಕಟೇಶಕುಮಾರ, ಬೆಳಗಾವಿ ನಗರ ಪೊಲೀಸ್ ಆಯುಕ್ತ ಡಾ.ಕೆ.ತ್ಯಾಗರಾಜನ್, ಅಧಿವೇಶನ ವಿಶೇಷಾಧಿಕಾರಿ ಡಾ.ಸುರೇಶ ಇಟ್ನಾಳ ಸೇರಿದಂತೆ ಇಲಾಖೆ ಅಧಿಕಾರಿಗಳು ಇದ್ದರು.



## 25 ಪರಿಷತ್ ಸದಸ್ಯರೂ ಅಧಿವೇಶನದಲ್ಲಿ ಪಾಲ್ಗೊಳ್ಳಬಹುದು

**ಬೆಳಗಾವಿ:** ಕೊರೋನಾ ವೈರಸ್ ಆತಂಕದ ಹಿನ್ನೆಲೆಯಲ್ಲಿ ಕೋವಿಡ್ ಮಾರ್ಗಸೂಚಿ ಅನ್ವಯವೇ ಸುವರ್ಣವಿಧಾನಸೌಧಲ್ಲಿ ಡಿ.13ರಿಂದ ವಿಧಾನಮಂಡಲ ಅಧಿವೇಶನ ನಡೆಸಲು ತೀರ್ಮಾನಿಸಲಾಗಿದೆ ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹೇಳಿದರು.

ನಗರದ ಸುವರ್ಣವಿಧಾನಸೌಧದಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕೆಲವು ಮುಂಜಾಗ್ರತಾ ಕ್ರಮಗಳನ್ನು ತೆಗೆದುಕೊಂಡು ಅಧಿವೇಶನ ನಡೆಸಲಾಗುವುದು. ಮುಂಬರುವ ಜನವರಿ 5ರವರೆಗೂ ಹಳೆಯ ವಿಧಾನ ಪರಿಷತ್ ಸದಸ್ಯರು ಕಲಾಪದಲ್ಲಿ ಪಾಲ್ಗೊಳ್ಳಲು ಅವಕಾಶವಿದೆ. ಈಗಿರುವ 25 ಜನ ವಿಧಾನ ಪರಿಷತ್ತಿನ ಸದಸ್ಯರು ಈ ಅಧಿವೇಶನದಲ್ಲಿ ಭಾಗವಹಿಸಲು ಅವಕಾಶ ನೀಡಲಾಗುವುದು. ಪರಿಷತ್ ಚುನಾವಣೆಯಲ್ಲಿ ಆಯ್ಕೆಯಾದವರು ಜನವರಿ 5ರ ನಂತರ ಪ್ರಮಾಣ ವಚನ ಸ್ವೀಕರಿಸುವರು ಎಂದು ಹೇಳಿದರು. ಈ ಅಧಿವೇಶನದಲ್ಲಿ ಅಂದಿನ ಅಜೆಂಡಾ ಪ್ರಕಾರವೇ ಕಲಾಪ ಚಟುವಟಿಕೆ ಪೂರ್ಣ ಮಾಡಲಾಗುವುದು ಎಂದ ಅವರು, ಬೆಳಗಾವಿಯಲ್ಲಿ ಶಾಸಕರ ಭವನ ಕಟ್ಟಡ ನಿರ್ಮಿಸುವ ಪ್ರಸ್ತಾವನೆಯನ್ನು ಮುಖ್ಯಮಂತ್ರಿ ಗಮನ ಸೆಳೆಯಲಾಗಿದೆ. ಈವರೆಗೆ ಬೆಳಗಾವಿಯಲ್ಲಿ ನಡೆದಿರುವ ಅಧಿವೇಶನಕ್ಕೆ ವಸತಿಗೆ ಮಾಡಲಾದ ಖರ್ಚಿನಲ್ಲಿ ಇಷ್ಟೊತ್ತಿಗಾಗಲೇ ಭವನ ನಿರ್ಮಾಣವಾಗುತ್ತಿತ್ತು. ಇನ್ನೊಂದು ಬಾರಿ ಈ ಕುರಿತು ಮುಖ್ಯಮಂತ್ರಿ ಜೊತೆಗೆ ಮಾತುಕತೆ ಮಾಡಲಾಗುವುದು ಎಂದು ಹೇಳಿದರು.

## ರಾಜ್ಯಸಭಾ ಸದಸ್ಯರ ಅಮಾನತು ಸ್ವಾಗತಾರ್ಹ

**ಬೆಳಗಾವಿ:** ಸದ್ಯ ಸಂಸತ್ತಿನ ಅಧಿವೇಶನದಲ್ಲಿ ಆಗುತ್ತಿರುವ ಘಟನೆ ನನಗೆ ತೀವ್ರ ನೋವುಂಟು ಮಾಡಿದ್ದು, ರಾಜ್ಯಸಭೆ ಮತ್ತು ಲೋಕಸಭೆಯಲ್ಲಿ ಕಠಿಣವಾಗಿ ತೆಗೆದುಕೊಂಡ ಕ್ರಮವನ್ನು ಸ್ವಾಗತಿಸುತ್ತೇನೆ ಎಂದು ವಿಧಾನಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಹೇಳಿದರು.

ಸುವರ್ಣ ವಿಧಾನಸೌಧದಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯಸಭೆಯಲ್ಲಿ ಗದ್ದಲ ಸೃಷ್ಟಿಸಿದ ವಿಚಾರ ಸಂಬಂಧ 12 ಸದಸ್ಯರನ್ನು ಅಮಾನತುಗೊಳಿಸಿರುವುದು ಸ್ವಾಗತಾರ್ಹ. ಕಳೆದ ಲೋಕಸಭಾ ಅಧಿವೇಶನದಲ್ಲಿ ನಡೆದ ಘಟನೆ ಖಂಡಿಸಿ ನಾನು ಪ್ರಧಾನಮಂತ್ರಿ, ರಾಷ್ಟ್ರಪತಿ, ಲೋಕಸಭಾಧ್ಯಕ್ಷರು, ರಾಜ್ಯಸಭಾಧ್ಯಕ್ಷರಿಗೆ ಪತ್ರ ಬರೆದಿದ್ದೆ. ರಾಜ್ಯಸಭಾ ಕಲಾಪದ ಪರಿಸ್ಥಿತಿ ಹೀಗಾದರೆ, ವಿಧಾನಸಭಾ ಕಲಾಪ ಹೇಗೆ ನಡೆಯಬಹುದು ಎಂಬ ಆತಂಕವನ್ನು ನಾನು ವ್ಯಕ್ತಪಡಿಸಿದ್ದೆ ಎಂದರು.

ಪ್ರಜಾಪ್ರಭುತ್ವ ವ್ಯವಸ್ಥೆಗೆ ಶಕ್ತಿ ತುಂಬಬೇಕಾಗಿದ್ದು ಶಾಸಕಾಂಗದಲ್ಲಿರುವವರು. ನಮ್ಮನ್ನು ಸಾವಿರ ಸಾವಿರ ಕಣ್ಣುಗಳು ನೋಡುತ್ತಿರುತ್ತವೆ. ವಿಚಾರದ ಭಿನ್ನಾಭಿಪ್ರಾಯ ಏನೇ ಇದ್ದರೂ ನಡವಳಿಕೆಗಳು ನಮ್ಮ ಚೌಕಟ್ಟಿನಲ್ಲಿರಬೇಕು ಎಂದು ಹೇಳಿದರು.

ಚರ್ಚೆಗೆ ಅವಕಾಶ ಕೊಡದೇ ಇರುವವರ ಮೇಲೆ ಕಠಿಣ ಕ್ರಮ ಕೈಗೊಳ್ಳಬೇಕಾಗುತ್ತದೆ. ಜನರ ಭಾವನೆಗೆ ತಕ್ಕಂತೆ ಸದನವನ್ನು ನಡೆಸುವ ಜವಾಬ್ದಾರಿ ನಮ್ಮ ಮೇಲಿದೆ. ವಿಷಯಗಳಲ್ಲಿ, ವಿಚಾರಗಳಲ್ಲಿ ಸಾವಿರ ಭಿನ್ನಾಭಿಪ್ರಾಯ ಇರುತ್ತವೆ. ಸದನದಲಿ ಅಶಿಸ್ತಿನಿಂದ ವರ್ತಿಸುವುದು ಯಾರಿಗೂ ಶೋಭೆ ತರುವ ವಿಚಾರವಲ್ಲ ಎಂದು ಹೇಳಿದರು. ಅಧಿವೇಶನವನ್ನು ಸವಾಲಿನ ನಡುವೆ ಮಾಡುತ್ತಿದ್ದೇವೆ. ಸರ್ಕಾರದಿಂದ ಇದುವರೆಗೂ ಯಾವುದೇ ಮಸೂದೆ ನಮ್ಮ ಮುಂದೆ ಬಂದಿಲ್ಲ. ಮಸೂದೆ ಮಂಡಿಸುವುದಿದ್ದರೆ ವಾರದ ಮುಂಚೆ ಕಳುಹಿಸಿಕೊಡುವಂತೆ ಸರ್ಕಾರಕ್ಕೆ ಸೂಚಿಸಲಾಗಿದ್ದು, ಇನ್ನೂ ಕಾಲಾವಕಾಶವಿದೆ ಎಂದು ಅವರು ಹೇಳಿದರು.



ವಿಧಾನಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ, ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರು ಸುವರ್ಣಸೌಧದಲ್ಲಿ ಅಧಿವೇಶನದ ಪೂರ್ವಸಿದ್ಧತೆಗಳನ್ನು ಪರಿಶೀಲಿಸಿದರು.

ಕನ್ನಡಪ್ರಭ
Fri, 03 December 2021
https://kpepaper.asianetnews.com/c/6472